ಶಿವಾಜಿನಗರ ವಿಧಾನ ಸಭಾ ಕ್ಷೇತ್ರದಲ್ಲಿ ವಿದ್ಯುತ್ ಉಪಕೇಂದ್ರದ ಸ್ಥಾಪನೆ

1818 (2172) ಶ್ರೀ ಕಟ್ಟಾ ಸುಬ್ರಮಣ್ಯ ನಾಯ್ಡು (ಶಿವಾಜಿನಗರ):

ಮಾನ್ಯ ಇಂಧನ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

(ಅ) ಶಿವಾಜಿನಗರ ವಿಧಾನಸಭಾ ಕ್ಷೇತ್ರದಲ್ಲಿರುವ ಸಂಪಂಗಿರಾಮನಗರದಲ್ಲಿ 2x20 ಎಂ.ವಿ.ಎ. ವಿದ್ಯುತ್ ಉಪಕೇಂದ್ರವನ್ನು ಸ್ಥಾಪಿಸಲು ನಿರ್ಧರಿಸಲಾಗಿದೆಯೆ;

(ಆ) ಹಾಗಿದ್ದಲ್ಲಿ, ಇದಕ್ಕಾಗಿ ಬೇಕಾದಂಥ ಸ್ಥಳವನ್ನು ಸ್ವಾಧೀನಪಡಿಸಿಕೊಳ್ಳಲಾಗಿದೆಯೆ;

(ಇ) ಇಲ್ಲದಿದ್ದಲ್ಲಿ, ಇದಕ್ಕಾಗಿ ಕೈಗೊಂಡ ಕ್ರಮಗಳೇನು;

(ಈ) ಈ ವಿದ್ಯುತ್ ಉಪಕೇಂದ್ರವನ್ನು ಯಾವಾಗ ಸ್ಥಾಪಿಸಲಾಗುವುದು?

ಶ್ರೀ ವೀರಕುಮಾರ್ ಪಾಟೀಲ್ (ಮಾನ್ಯ ಇಂಧನ ರಾಜ್ಯ ಸಚಿವರು)

(ಅ) ಹೌದು. ಶಿವಾಜಿನಗರ ವಿಧಾನಸಭಾ ಕ್ಷೇತ್ರದಲ್ಲಿರುವ ಸಂಪಂಗಿರಾಮನಗರದಲ್ಲಿರುವ ಕಂಠೀರವ ಕ್ರೀಡಾಂಗಣದ ಆವರಣದಲ್ಲಿ ಒಂದು 66:11 ಕೆ.ವಿ, 2x20 ಎಂ.ವಿ.ಎ. ವಿದ್ಯುತ್ ಉಪಕೇಂದ್ರವನ್ನು ಸ್ಥಾಪಿಸಲು ಉದ್ದೇಶಿಸಿದೆ.

(ಆ) ಇಲ್ಲ.

(ಇ) ಈ ಉದ್ದೇಶಿತ ವಿದ್ಯುತ್ ಉಪಕೇಂದ್ರವನ್ನು ಸ್ಥಾಪಿಸಲು ಬೇಕಾಗಿರುವ ಸ್ಥಳಕ್ಕಾಗಿ ಕರ್ನಾಟಕ ಸರ್ಕಾರದ ಯುವಜನ ಸೇವಾ ಇಲಾಖೆಗೆ ನಿಗಮವು ಮನವಿಯನ್ನು ಸಲ್ಲಿಸಿದ್ದು, ಸದರಿ ಇಲಾಖೆಯಿಂದ ಮಂಜೂರಾತಿ ದೊರೆಯಬೇಕಾಗಿದೆ.

(ಈ) ಸದರಿ ಇಲಾಖೆಯಿಂದ ಅವಶ್ಯಕವಾದ ಸ್ಥಳಕ್ಕೆ ಮಂಜೂರಾತಿ ದೊರೆತ ನಂತರ ನಿರ್ಮಾಣ ಕಾರ್ಯವನ್ನು ಕೈಗೊಳ್ಳಲು ಸಾಧ್ಯವಾಗುತ್ತದೆ.

ಶಿವಾಜಿನಗರ ಕ್ಷೇತ್ರದಲ್ಲಿ ಓವರ್ ಹೆಡ್ ಟ್ಯಾಂಕ್‌ಗಳ ಕುರಿತು

1819 (2173) ಶ್ರೀ ಕಟ್ಟಾ ಸುಬ್ರಮಣ್ಯ ನಾಯ್ಡು (ಶಿವಾಜಿನಗರ):

ಮಾನ್ಯ ಮುಖ್ಯಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

(ಅ) ಶಿವಾಜಿನಗರ ವಿಧಾನಸಭಾ ಕ್ಷೇತ್ರದಲ್ಲಿ ಕುಡಿಯುವ ನೀರನ್ನು ಒದಗಿಸುವ ಸಲುವಾಗಿ ಇರತಕ್ಕ ಓವರ್ ಹೆಡ್ ಟ್ಯಾಂಕ್‌ಗಳ ಸಂಖ್ಯೆ ಎಷ್ಟು;

(ಆ) ಈ ಟ್ಯಾಂಕ್‌ಗಳಲ್ಲಿ ಶೇಖರಿಸುವ ನೀರಿನ ಪ್ರಮಾಣ ಎಷ್ಟು;

(ಇ) ಈ ಕ್ಷೇತ್ರದ ಜನರಿಗೆ ಕುಡಿಯುವ ನೀರನ್ನು ಸಮರ್ಪಕವಾಗಿ ಒದಗಿಸಲು ಹೊಸದಾಗಿ ಓವರ್ ಹೆಡ್ ಟ್ಯಾಂಕ್‌ಗಳ ನಿರ್ಮಾಣ ಕಾರ್ಯವನ್ನು ಕೈಗೊಳ್ಳಲಾಗಿದೆಯೇ;

(ಈ) ಹಾಗಿದ್ದಲ್ಲಿ ಪೂರ್ಣ ವಿವರ ಒದಗಿಸುವುದು?

ಶೀ ಎಸ್.ಎಂ. ಕೃಷ್ಣ (ಮುಖ್ಯಮಂತ್ರಿಯವರು)

(ಅ) ಒಂದು.

(ಆ) ಎರಡು ಲಕ್ಷ ಗ್ಯಾಲನ್‌ಗಳು

(ಇ) ಶಿವಾಜಿನಗರ ಕ್ಷೇತ್ರದ ಜನತೆಗೆ ಕುಡಿಯುವ ನೀರನ್ನು ಸಮರ್ಪಕವಾಗಿ ಒದಗಿಸಲು ನಾಲ್ಕು ದಶಲಕ್ಷ ಗ್ಯಾಲನ್ ನೆಲಮಟ್ಟದ ಜಲಾಶಯದಿಂದ ನೀರನ್ನು ಪಂಪಿನ ಮೂಲಕ ಒದಗಿಸುತ್ತಿರುವುದರಿಂದ ಹಾಗೂ ಒತ್ತಡ ಇರುವುದರಿಂದ ಪ್ರತ್ಯೇಕ ಓವರ್ ಹೆಡ್ ಟ್ಯಾಂಕ್‌ನ ನಿರ್ಮಾಣದ ಅವಶ್ಯಕತೆ ಇರುವುದಿಲ್ಲ.

(ಈ) ಉದ್ಭವಿಸುವುದಿಲ್ಲ.

ಬೆಂಗಳೂರು ಅಜೆಂಡಾ ಟಾಸ್ಕ್ ಫೋರ್ಸ್ ರಚನೆ

1821 (2175) ಶ್ರೀ ಕಟ್ಟಾ ಸುಬ್ರಮಣ್ಯ ನಾಯ್ಡು (ಶಿವಾಜಿನಗರ):

ಮಾನ್ಯ ಮುಖ್ಯಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

(ಅ) ಬೆಂಗಳೂರು ಅಜೆಂಡಾ ಟಾಸ್ಕ್‌ಫೋರ್ಸ್ ಯಾವಾಗ ರಚನೆಯಾಯಿತು;

(ಆ) ಈ ಟಾಸ್ಕ್‌ಫೋರ್ಸ್ ಇದುವರೆಗೆ ಕೈಗೊಂಡ ಕಾರ್ಯಕ್ರಮಗಳು ಯಾವುವು;

(ಇ) ಈ ಟಾಸ್ಕ್‌ಫೋರ್ಸ್‌ಗಾಗಿ ಸರ್ಕಾರ ಇದುವರೆಗೆ ಖರ್ಚು ಮಾಡಿರುವ ಹಣವೆಷ್ಟು;

(ಈ) ಈ ಟಾಸ್ಕ್‌ಫೋರ್ಸ್‌ನ್ನು ರಚಿಸಲು ಇದ್ದಂಥ ಕಾರಣಗಳು ಯಾವುವು?

ಶೀ ಎಸ್.ಎಂ. ಕೃಷ್ಣ (ಮುಖ್ಯಮಂತ್ರಿಗಳು)

(ಅ) 26-11-1999.

(ಆ) ಬೆಂಗಳೂರಿನ ಅಭಿವೃದ್ಧಿಗೆ ಸಂಬಂಧಪಟ್ಟಂತೆ ನಾಗರೀಕ ಸೌಲಭ್ಯಗಳನ್ನು ಉತ್ತಮಗೊಳಿಸುವುದು ಆಧಾಯದ ಮೂಲಗಳನ್ನು ಸೃಷ್ಟಿಸುವುದು ಸಾರ್ವಜನಿಕ ಸಂಸ್ಥೆಗಳನ್ನು ಹಾಗೂ ಕೈಗಾರಿಕೋದ್ಯಮಗಳನ್ನು ತೊಡಗಿಸಿಕೊಂಡು ಯೋಜನಾಬದ್ಧವಾದ ಕಾರ್ಯಕ್ರಮಗಳನ್ನು ಜಾರಿಗೊಳಿಸುವುದು ಇತ್ಯಾದಿ ಕಾರ್ಯಕ್ರಮಗಳಲ್ಲಿ ಕಾರ್ಯಪ್ರವೃತ್ತವಾಗಿದೆ.

(ಇ) ಸರ್ಕಾರದಿಂದ ಯಾವುದೇ ಹಣ ಖರ್ಚು ಮಾಡಿರುವುದಿಲ್ಲ.

(ಈ) ಈ ಟಾಸ್ಕ್ ಫೋರ್ಸ್‌ನ್ನು ರಚಿಸಲು ಕಾರಣವೇನೆಂದರೆ, ಬೃಹದಾಕಾರವಾಗಿ ಬೆಳೆಯುತ್ತಿರುವ ಬೆಂಗಳೂರು ನಗರವನ್ನು ಸ್ವಚ್ಛ ನಿರ್ಮಲ ಮತ್ತು ಮಾದರಿ ನಗರವನ್ನಾಗಿ ಪರಿವರ್ತಿಸಲು ಮತ್ತು ಬೆಂಗಳೂರು ನಗರದ ನಾಗರೀಕರಿಗೆ ಉತ್ತಮ ನಾಗರೀಕ ಮೂಲಭೂತ ಸೌಕರ್ಯವನ್ನು ಒದಗಿಸುವ ಉದ್ದೇಶದಿಂದ ರಚಿಸಲಾಯಿತು.